ಎ-72-25

**ಶ್ರೀ ಅರುಣ ಶಹಾಪುರ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 25 ಕ್ಕೆ ಉತ್ತರ.**

**ಸೂಚನೆ:** ಸಮಾಜ ಕಲ್ಯಾಣ ಇಲಾಖೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು, ಸಿಬ್ಬಂದಿಗಳು ಸೇವೆಯಲ್ಲಿರುವಾಗಲೇ ಮೃತಪಟ್ಟಲ್ಲಿ ಅವರ ಅವಲಂಬಿತರ ಕುಟುಂಬದವರಿಗೆ ಅನುಕಂಪದ ಹುದ್ದೆ ನೀಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:** ಸಮಾಜ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಯಾದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಇಂಧಿರಾ ಗಾಂಧಿ ವಸತಿ ಶಾಲೆ/ ಆಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆ/ ಪದವಿ ಪೂರ್ವ ವಸತಿ ಕಾಲೇಜುಗಳಲ್ಲಿ ಭೋಧಕ ಮತ್ತು ಭೋಧಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, 2012 ರಿಂದ ತಹಲ್‌ರಿಗೆ ಒಟ್ಟು 36 ಸಿಬ್ಬಂದಿಗಳು ನಿಧನ ಹೊಂದಿರುತ್ತಾರೆ.

ಸದರಿ ಮೃತಪಟ್ಟ 36 ನೌಕರರ ಕುಟುಂಬದ ಸದಸ್ಯರುಗಳ ಪೈಕಿ ತಹಲ್‌ವರೆಗೂ ಒಟ್ಟು 11 ಸದಸ್ಯರುಗಳಿಗೆ ಅನುಕಂಪದ ಆಧಾರದ ಮೇಲೆ ಪ್ರಥಮ ದರ್ಜೆ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ನೇಮಕಾತಿ ಆದೇಶ ನೀಡಿ ವಿವಿಧ ವಸತಿ ಶಾಲೆ/ಕಾಲೇಜುಗಳಿಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

ಉಳಿದ 25 ಮೃತ ನೌಕರರ ಕುಟುಂಬದ ಸದಸ್ಯರ ಪೈಕಿ 08 ಸದಸ್ಯರಿಗೆ ವಿದ್ಯಾರ್ಹತೆ, ವಯೋಮಿತಿ ಅಪ್ರಾಪ್ತ ವಯಸ್ಕರಾಗಿದ್ದ ಕಾರಣ ಸೂಕ್ತ ಹಿಂಬರಹ ನೀಡಲಾಗಿದೆ. ಹಾಗೂ 17 ಮೃತ ಕುಟುಂಬದ ಅರ್ಹ ಸದಸ್ಯರುಗಳಿಗೆ ಅನುಕಂಪದ ಆಧಾರದ ಮೇಲೆ ಹುದ್ದೆ ನೀಡುವ ಬಗ್ಗೆ ಕ್ರಮವಹಿಸಲಾಗಿದ್ದು, ದಾಖಲಾತಿಗಳ ಪರಿಶೀಲನೆ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತವೆ.

**(ಬಿ.ಶ್ರೀರಾಮುಲು)**
**ಸಮಾಜ ಕಲ್ಯಾಣ ಇಲಾಖಾ ಸಚಿವರು.**

**ಕಡತ ಸಂಖ್ಯೆ: ಸಕಇ 396 ಮೊದೇಶಾ 2020**